**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪಂರಾ 199 ಜಿಪಸ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:04-06-2020

**ಸುತ್ತೋಲೆ (ಸೇರ್ಪಡೆ)**

ವಿಷಯ: ಕೋವಿಡ್-19 ಸಾಂಕ್ರಾಮಿಕ ಪಿಡುಗು ಮತ್ತು ಗ್ರಾಮ ಪಂಚಾಯತಿಗಳಲ್ಲಿ ಲಾಕ್ ಡೌನ್ ವಿಸ್ತರಿಸಿರುವ ಹಿನ್ನೆಲೆಯಲ್ಲಿ 14ನೇ ಹಣಕಾಸು ಆಯೋಗದ ಅನುದಾನವನ್ನು ವಿನಿಯೋಗಿಸುವ ಬಗ್ಗೆ ಮಾರ್ಗಸೂಚಿಗಳ ಕುರಿತು.

ಉಲ್ಲೇಖ:
1. ಜಂಟಿ ಕಾರ್ಯದರ್ಶಿ, ಪಂಚಾಯತ್ ರಾಜ್ ಮಂತ್ರಾಲಯ, ಭಾರತ ಸರ್ಕಾರ ಇವರ ಅ.ಸ.ಪತ್ರ ಸಂ. ಎನ್-11011/9/2016-ಎಫ್‌ಡಿ, ದಿನಾಂಕ: 03-04-2020.
2. ಜಂಟಿ ಕಾರ್ಯದರ್ಶಿ, ಪಂಚಾಯತ್ ರಾಜ್ ಮಂತ್ರಾಲಯ, ಭಾರತ ಸರ್ಕಾರ ಇವರ ಅ.ಸ.ಪತ್ರ ಸಂ. ಎನ್-11011/9/2016-ಎಫ್‌ಡಿ, ದಿನಾಂಕ: 15-04-2020.
3. ಸರ್ಕಾರದ ಸಮ ಸಂಖ್ಯೆಯ ಸುತ್ತೋಲೆ ದಿನಾಂಕ:17-04-2020.
4. ಸರ್ಕಾರದ ಸಮ ಸಂಖ್ಯೆಯ ಸುತ್ತೋಲೆ ದಿನಾಂಕ:24-04-2020.

***

ಉಲ್ಲೇಖ(3)ರ ಸುತ್ತೋಲೆಯಲ್ಲಿ 14ನೇ ಹಣಕಾಸು ಆಯೋಗದ ಅನುದಾನದಲ್ಲಿ ಕೋವಿಡ್-19ಕ್ಕೆ ಸಂಬಂಧಪಟ್ಟಂತೆ ಬಳಕೆ ಮಾಡಬಹುದಾದ ಮಾರ್ಗಸೂಚಿಯನ್ನು ನೀಡಲಾಗಿದೆ. ಉಲ್ಲೇಖ(4)ರ ಸುತ್ತೋಲೆಯಲ್ಲಿ ವಲಸೆ ಕಾರ್ಮಿಕರಿಗೆ ಮತ್ತು ದುರ್ಬಲ ವರ್ಗದವರಿಗೆ ಊಟ, ವಸತಿ ಮತ್ತು ಇತರೆ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಸರ್ಕಾರವು ನಗರ ಪ್ರದೇಶದಿಂದ ಗ್ರಾಮಾಂತರ ಪ್ರದೇಶಕ್ಕೆ ಹಿಂದಿರುಗಿ ಬಂದಂತಹ ವಲಸೆ ಕಾರ್ಮಿಕರ ಅವಶ್ಯಕತೆಗಳನ್ನು ಗಣನೆಗೆ ತೆಗೆದುಕೊಂಡು ಈ ಕೆಳಕಂಡಂತೆ ಆದೇಶಿಸಿದೆ.

**ಗ್ರಾಮಾಂತರ ಪ್ರದೇಶಕ್ಕೆ ನಗರ ಪ್ರದೇಶಗಳಿಂದ ಹಿಂದಿರುಗಿರುವ ವಲಸೆ ಕಾರ್ಮಿಕ ಮಹಿಳೆಯರಿಗೆ, ಕ್ವಾರಂಟೈನ್ ನಲ್ಲಿರುವ ಅವಧಿಯಲ್ಲಿ ಗ್ರಾಮ ಪಂಚಾಯತಿಯ ಸ್ವಂತ ಅನುದಾನದಲ್ಲಿ ಅಥವಾ 14ನೇ ಹಣಕಾಸು ಆಯೋಗದ ಅನುದಾನದಲ್ಲಿ ಅಥವಾ ದಾನಿಗಳ ಮುಖಾಂತರ ಸ್ಯಾನಿಟರಿ ಪ್ಯಾಡ್‌ಗಳನ್ನು ಸರಬರಾಜು ಮಾಡುವುದು.**

(ಉಮಾ ಮಹಾದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಲಲಿತಮಹಲ್ ರಸ್ತೆ, ಮೈಸೂರು.

3. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು, (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
4. ಎಲ್ಲಾ ಗ್ರಾಮ ಪಂಚಾಯತಿ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು (ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿರವರ ಮಾಹಿತಿಗಾಗಿ.
3. ನಿರ್ದೇಶಕರು (ಪಂ.ರಾಜ್-1 ಮತ್ತು 2) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
4. ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
5. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
6. ವೆಬ್ ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.